# ಕರ್ನಾಟಕ ಸರ್ಕಾರ
# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/239/ಪಿಹೆಚ್‌ಡಿ/2021-22/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 05-01-2023

## : ಸುತ್ತೋಲೆ :

ವಿಷಯ: ದಿನಾಂಕ: 01.01.2016 ರ ನಂತರ ಪಿ.ಹೆಚ್.ಡಿ ಪದವಿ ಪೂರೈಸಿರುವ ಬೋಧಕರುಗಳಿಗೆ 2016 ರ ಯುಜಿಸಿ ವೇತನ ಶ್ರೇಣಿಯನ್ವಯ ಮುಂಗಡ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 11-01-2021.

*******

ದಿನಾಂಕ: 01.01.2016 ರ ನಂತರ ಪಡೆದ ಪಿ.ಹೆಚ್.ಡಿ ಪದವಿಗೆ ಮುಂಗಡ ವೇತನ ಬಡ್ತಿಗಳನ್ನು ಮಂಜೂರು ಮಾಡುವ ಸಂಬಂಧ ಪ್ರಸ್ತಾವನೆಗಳನ್ನು ಸಲ್ಲಿಸದಿರುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಆದರೆ ಪಿ.ಹೆಚ್.ಡಿ ಮುಂಗಡ ವೇತನ ಬಡ್ತಿ ಮಂಜೂರು ಮಾಡಲು ಕೋರಿ ವಿವಿಧ ಕಾಲೇಜುಗಳಿಂದ ಸಲ್ಲಿಸಿರುವ ಮನವಿ/ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿದ್ದು, ಸದರಿ ಪ್ರಸ್ತಾವನೆಗಳನ್ನು ಪ್ರಸ್ತುತ ವಿಲೇ ಇಡಲಾಗಿದೆ. ಆದುದರಿಂದ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಸ್ತಾವನೆಗಳನ್ನು ಸಲ್ಲಿಸದಿರುವಂತೆ ಮತ್ತೊಮ್ಮೆ ತಿಳಿಸಲಾಗಿದೆ.

05/01/2023

ಮುಖ್ಯ ಆಡಳಿತಾಧಿಕಾರಿಗಳು,
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ:

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾನ್ಯ ಆಯುಕ್ತರು/ನಿರ್ದೇಶಕರು/ಹೆಚ್ಚುವರಿ ನಿದೇಶಕರ ಆಪ್ತ ಶಾಖೆಗಳಿಗೆ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು.
2. ಕಛೇರಿ ಪ್ರತಿ.